ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ ವಾರ್ತಾಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

ಸಂಪುಟ : 1 । ಸಂಚಿಕೆ : 7 ಮಾರ್ಚ್ : 2019 ಪುಟಗಳು : 20 । ಬೆಲೆ : 25/–



## ಸಹಕಾರಿ ಬಂಧುಗಳಿಗೆ "ಮಹಾಶಿವರಾತ್ರಿ"ಯ ಶುಭಾಷಯಗಳು

ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ, ಬೆಂಗಳೂರು.

ಮನೋಬುದ್ಧ್ಯಹಂಕಾರ
ಚಿತ್ತಾನಿನಾಹಂ, ನ ಚ ಶ್ರೋತ್ರಜಿಹ್ವೇ
ನ ಚ ಘ್ರಾಣನೇತ್ರೇ ।
ನ ಚ ವ್ಯೋಮ
ಭೂಮಿರ್ನತೇಜೋ
ನ ವಾಯುಃ,
ಚಿದಾನಂದರೂಪಃ
ಶಿವೋಹಂ ಶಿವೋಹಂ ॥

–ಆದಿ ಶಂಕರಾಚಾರ್ಯ

# ಖಾಸಗಿ ಲೇವಾದೇವಿ ನಿಯಂತ್ರಣ ಕಾಯ್ದೆ ಶೀಘ್ರ ಜಾರಿ : ಸಚಿವ ಶ್ರೀ ಬಂಡೆಪ್ಪ ಖಾಶೆಂಪೂರ



**ಬೆಂಗಳೂರು:** ಖಾಸಗಿ ಲೇವಾದೇವಿ ನಿಯಂತ್ರಣ ಕಾಯ್ದೆ ಜಾರಿಯಿಂದ ಬಡವರ ಮೇಲೆ ದೌರ್ಜನ್ಯವೆಸಗುವ ಖಾಸಗಿ ಲೇವಾದೇವಿ ಬಡ್ಡಿ ಕೋರರ ಹಾವಳಿ ನಿಯಂತ್ರಣಕ್ಕೆ ಬರಲಿದೆ ಎಂದು ಸಹಕಾರ ಸಚಿವರಾದ ಶ್ರೀ ಬಂಡೆಪ್ಪ ಖಾಶೆಂಪೂರ ಹೇಳಿದರು.

ಕರ್ನಾಟಕ ಆರ್ಯವೈಶ್ಯ ಮಹಾಮಂಡಳಿಯಿಂದ ನೂತನವಾಗಿ ಆರಂಭಿಸಲಾಗಿರುವ ಕರ್ನಾಟಕ ಆರ್ಯವೈಶ್ಯ ಸಾಯಿ ಪತ್ತಿನ ಸಹಕಾರ ಸಂಘವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ದೇವರಾಜು ಅರಸು ಅವರು 1972ರಲ್ಲಿ ಬಡವರ ಅನುಕೂಲಕ್ಕಾಗಿ ಇಂತಹ ಕಾಯ್ದೆಯನ್ನು ಜಾರಿಗೆ ತಂದಿದ್ದರು. ಇದೀಗ ಮುಖ್ಯಮಂತ್ರಿ ಶ್ರೀ ಎಚ್.ಡಿ. ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರ ಮಸೂದೆಯನ್ನು ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಡಿಸಿ ಅಂಗೀಕಾರ ಪಡೆದಿದೆ. ರಾಷ್ಟ್ರಪತಿ ಅಂಕಿತ ಬಿದ್ದ ಬಳಿಕ ಕಾಯ್ದೆ ಜಾರಿಗೆ ಬರಲಿದೆ' ಎಂದರು.

'ಖಾಸಗಿ ವ್ಯಕ್ತಿಗಳು ಬಡವರಿಗೆ ಹಣ ನೀಡಿ ಅವರಿಂದ ಹೆಚ್ಚಿನ ಬಡ್ಡಿ ವಸೂಲಿ ಮಾಡುವುದನ್ನು ಕಾಯ್ದೆ ತಡೆಯುತ್ತದೆ. ಇದು ಜಾರಿಯಾದ ದಿನದಿಂದ ಒಂದು ವರ್ಷದವರೆಗಿನ ಖಾಸಗಿ ವ್ಯಕ್ತಿಗಳು ಪಡೆದ ಎಲ್ಲಾ ಸಾಲ ಮನ್ನಾ ಆಗಲಿದೆ' ಎಂದರು.

ವಿಧಾನ ಪರಿಷತ್ ಸದಸ್ಯರಾದ ಶ್ರೀ ಟಿ.ಎ. ಶರವಣ ರವರು ಮಾತನಾಡಿ, 'ಖಾಸಗಿ ಲೇವಾದೇವಿ ನಿಯಂತ್ರಣ ಮಸೂದೆ ಜಾರಿಗೆ ಬಂದರೆ ಬಡ ಸಾಲಗಾರರಿಗೆ ಅನುಕೂಲವಾಗಲಿದೆ. ಬಡ್ಡಿಕೋರರ ದೌರ್ಜನ್ಯದಿಂದ ಮುಕ್ತಿ ದೊರೆಯಲಿದೆ ಎಂದು ಹೇಳಿದರು. 'ಸಹಕಾರ ಬ್ಯಾಂಕುಗಳಲ್ಲಿ ಮಹಿಳೆಯರು ಚಿನ್ನಾಭರಣ ಅಡವಿಟ್ಟು ಶೇಕಡ 3ರ ಬಡ್ಡಿ ದರದಲ್ಲಿ ಸಾಲ ಪಡೆಯಲು ರಾಜ್ಯ ಸರ್ಕಾರ ಅವಕಾಶ ಕಲ್ಪಿಸಿದೆ. ಇದರಿಂದ ವ್ಯವಸಾಯಗಾರರಿಗೆ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

# "ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಕಟ್ಟಡ ನಿರ್ಮಾಣಕ್ಕೆ ದೇಣಿಗೆ ಸಲ್ಲಿಕೆ"



**ಬೆಂಗಳೂರು :** ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು ಇದರ ಕಟ್ಟಡ ನಿರ್ಮಾಣಕ್ಕೆ ಮಹಾಮಂಡಳದ ಸದಸ್ಯ ಸಹಕಾರ ಸಂಘವಾದ ಕರ್ನಾಟಕ ಪವರ್ ಕಾರ್ಪೋರೇಷನ್ ಲಿ., ಎಂಪ್ಲಾಯೀಸ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು ಈ ಸಹಕಾರ ಸಂಘವು 50,000/– ರೂ. ಗಳ ದೇಣಿಗೆಯನ್ನು ಮಹಾಮಂಡಳದ ಅಧ್ಯಕ್ಷರಾದ ಶ್ರೀ ಸಿ.ಎಂ. ಮಾರೇಗೌಡ ರವರಿಗೆ ಸಂಘದ ಅಧ್ಯಕ್ಷರಾದ ಶ್ರೀ ಡಿ.ಆರ್. ನಾರಾಯಣಸ್ವಾಮಿ ನೀಡಿದರು. ಈ ಸಂದರ್ಭದಲ್ಲಿ ಮಹಾಮಂಡಳದ ನಿರ್ದೇಶಕರಾದ ಶ್ರೀ ಎಂ.ಜೆ. ನರೇಂದ್ರ ಕುಮಾರ ಮತ್ತು ಪ್ರಭಾರ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಪಿ. ಆಶಾಲತಾ ಹಾಗೂ ಸಂಘದ ನಿರ್ದೇಶಕರಾದ ಶ್ರೀ ಕೆ.ಎಸ್. ರವೀಂದ್ರ, ಶ್ರೀಮತಿ ಅನ್ನಪೂರ್ಣ ಪಂಡಿತ್, ಶ್ರೀ ಎಂ.ಡಿ. ಅರವಿಂದ ಮತ್ತು ಸಂಘದ ಕಾರ್ಯದರ್ಶಿ ಶ್ರೀ ಹೆಚ್.ವಿ. ಸತೀಶ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಜಾಹಿರಾತು ಮನವಿ




ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಮಾಸಿಕ ಸಹಕಾರ ಪತ್ರಿಕೆಯನ್ನು ಪ್ರಕಟ ಮಾಡುತ್ತಿದ್ದು, ಪತ್ತಿನ ಸಹಕಾರ ಚಳವಳಿಯ ಪೂರಕ ಚಟುವಟಿಕೆಗಳಿಗೆ ಪ್ರಚಾರ ನೀಡುತ್ತಾ ಬರುತ್ತಿದೆ.

ರಾಜ್ಯದ ಪತ್ತಿನ ಸಹಕಾರ ಸಂಘಗಳು ತಮ್ಮ ಕಾರ್ಯಪ್ರಗತಿಯ ವಿವರಗಳನ್ನು ಜಾಹಿರಾತು ಮೂಲಕ ಪ್ರಕಟಿಸಿದ್ದಲ್ಲಿ ಉತ್ತಮ ಪ್ರಚಾರ ಪಡೆದುಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ರಿಯಾಯಿತಿ ದರದಲ್ಲಿ ಜಾಹಿರಾತುಗಳನ್ನು ಪ್ರಕಟಿಸಲು ಉತ್ಸುಕವಾಗಿದೆ. ಸಹಕಾರ ಸಂಸ್ಥೆಗಳು ಸಂಪೂರ್ಣ ಮಾಹಿತಿಗಳೊಂದಿಗೆ ಜಾಹಿರಾತುಗಳನ್ನು ನೀಡಲು ಕೋರಿದೆ. ಜಾಹಿರಾತು ದರಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಿದೆ.

ಮೊಬೈಲ್ ನಂ. 9986836884, ದೂರವಾಣಿ: 080 23564444, 23464033, 23464034

ಇ–ಮೇಲ್ : ksccsfltd@gmail.com, info@ksccsf.org, ವೆಬ್‌ಸೈಟ್ : www.ksccsf.org

## ಸಹಕಾರ ವಾರ್ತಾ ಪತ್ರಿಕೆಗೆ ಚಂದಾದಾರರಾಗಲು ಮನವಿ

ಕರ್ನಾಟಕ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪ್ರಕಟಿಸುತ್ತಿರುವ ಮಾಸಿಕ ಸಹಕಾರ ವಾರ್ತಾ ಪತ್ರಿಕೆಗೆ ಈಗಾಗಲೇ ಚಂದಾದಾರರಾಗಿರುವ ಸದಸ್ಯ ಸಹಕಾರ ಸಂಘಗಳನ್ನು ಹೊರತುಪಡಿಸಿ ಇನ್ನುಳಿದ ಪತ್ತಿನ ಸಹಕಾರ ಸಂಘಗಳು "ಸಹಕಾರ ಮಾಸಿಕ ವಾರ್ತಾ ಪತ್ರಿಕೆ"ಗೆ ಚಂದಾದಾರರಾಗಲು ಈ ಮೂಲಕ ಮನವಿ ಮಾಡಲಾಗಿದೆ.

– **ಸಂಪಾದಕರು**

SAHAKARA VARTHA PATHRIKE KANNADA MONTHLY
RNI-REG NO : KARKAN/2018/75796
POST REG NO : KA/BGW-1816/2019-2021
POSTING DATE : 1 & 5TH EVERY MONTH
POSTED AT : P/C RMS BHAVAN, BANGALORE PSO, Blore-26
PUBLISHED ON : 29TH of Previous Month

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು

## ಆಡಳಿತ ಮಂಡಳಿ



ಶ್ರೀ ಸಿ.ಎಂ. ಮಾರೇಗೌಡ
ಅಧ್ಯಕ್ಷರು



ಡಾ. ಸಂಜಯ ಪಂ. ಹೊಸಮಠ
ಉಪಾಧ್ಯಕ್ಷರು



ಶ್ರೀ ವಿ. ರಾಜು



ಶ್ರೀ ಶಿವರಾಜ್ ಬಿ. ಪಾಟೀಲ್



ಡಾ. ಬಿ.ಡಿ. ಭೂಕಾಂತ್



ಶ್ರೀ ಗುರುರಾಜ್ ಹುಣಸಿಮರದ



ಶ್ರೀ ಎಂ.ಜೆ. ನರೇಂದ್ರ ಕುಮಾರ



ಡಾ. ಕೆ.ಎಲ್. ಶಿವರಾಮು



ಶ್ರೀಮತಿ ಕೆ. ಲಲಿತ



ಶ್ರೀ ಕೆ. ಕೃಷ್ಣಮೂರ್ತಿ



ಶ್ರೀ ಎನ್.ಬಿ. ರವೀಶಯ್ಯ



ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ



ಶ್ರೀ ಜಿ. ಮಲ್ಲಿಕಾರ್ಜುನಯ್ಯ



ಶ್ರೀ ತಮ್ಮಣ್ಣ ಬಿ. ಕೆಂಚರೆಡ್ಡಿ



ಶ್ರೀ ಧರೇಪ್ಪ ಎಂ. ಆಲಗೂರ



ಡಾ. ಗುರುಪಾದಪ್ಪಗೌಡ ಬ. ಪಾಟೀಲ



ಶ್ರೀ ಹೊನ್ನಯ್ಯ ವಿ. ಹಿರೇಮಠ



ಡಾ. ಆಕಾಶ ಪಾಟೀಲ



ಶ್ರೀ ಪಿ.ಕೆ. ಜಯಕೃಷ್ಣಗೌಡ



ಕೆ. ನಾರಾಯಣ



ಶ್ರೀ ಕೆ.ಎಸ್. ಗುರುಪ್ರಸಾದ್
ಸಲಹೆಗಾರರು



ಶ್ರೀಮತಿ ಆಶಾಲತಾ ಪಿ.
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು
ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Printed at : Biligiri Printers
Chamrajpet, Bengaluru - 18.